## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ.ಕೆ.ಜಿ.ಪುರುಷೋತ್ತಮ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ – ಅಂತಿಮ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/100/ಗ್ರಾಪಂಕಾ/2016, ಬೆಂಗಳೂರು, ದಿನಾಂಕ:03-03-2016.
2. ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-1/ಆಇ/63/2016/ಂಖಇ-10, ದಿನಾಂಕ:22-12-2017.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ:UPLOK-1/DE/63/2016/ARE-10, ದಿನಾಂಕ:26-12-2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/10/ಗ್ರಾಪಂಕಾ/2018, ದಿನಾಂಕ:18-01-2018.
5. ಶ್ರೀ ಕೆ.ಜಿ. ಪುರುಷೋತ್ತಮ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 16-02-2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಕೆ.ಜಿ.ಪುರುಷೋತ್ತಮ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

"Sri.Purushotham, Panchayath Development Officer, Chikkanahalli Gram Panchayath, Bangalore South Taluk got the borewell repaired only after filing this complaint, though complainant submitted his application on 13.02.2014 in person and on 18.02.2014 by RPAD, DGO have refused to give the endorsement. DGO failed to get borewell repaired well within time.

DGO being a Government/public servant has failed to maintain absolute integrity besides devotion to duty and acted in a manner unbecoming of a Government Servant and thus committed misconduct as enumerated under Rule 3(1) of KCS (Conduct) Rules 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಕೆ.ಜಿ.ಪುರುಷೋತ್ತಮ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಸದರಿಯವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(iii)ರ ಅನ್ವಯ **"ಅವರ ಮುಂದಿನ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಕೆ.ಜಿ.ಪುರುಷೋತ್ತಮ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

> "ನಾನು ಚಿಕ್ಕನಹಳ್ಳಿ ಗ್ರಾ.ಪಂ:ಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಶಾಂತಿನಗರ ಗ್ರಾಮದ ನಿವಾಸಿ ಶ್ರೀ ಪುಟ್ಟಸ್ವಾಮಿ ಬಿನ್ ರೇವಣ್ಣ ಎಂಬುವವರು ತಾವು ದಿನಾಂಕ:18/02/2014ರಲ್ಲಿ ನೋಂದಾಯಿತ ಅಂಚೆ ಮೂಲಕ ಕೊಳವೆ ಬಾವಿಯ ಹ್ಯಾಂಡ್ ಪಂಪ್ ಕೆಟ್ಟು ಹೋಗಿದ್ದು ದುರಸ್ತಿಗೆ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ ಎಂದು ದೂರು ನೀಡಿರುತ್ತಾರೆ. ಆದರೆ ಸದರಿ ಹ್ಯಾಂಡ್ ಪಂಪನ್ನು ದಿನಾಂಕ:03-03-2014 ರಲ್ಲಿ ರಿಪೇರಿ ಮಾಡಲಾಗಿದ್ದು ಅದಕ್ಕೆ ಸಂಬಂಧಿಸಿದಂತೆ ದಿನಾಂಕ:12-04-2014 ರಲ್ಲಿ ರೂ.8500/-ಗಳಿಗೆ ನೀಡಿರುವ ಕ್ಯಾಷ್ ಬಿಲ್ಲನ್ನು ವಿಚಾರಣೆ ವೇಳೆ ಹಾಜರುಪಡಿಸಿರುತ್ತೇನೆ. ಮುಂದುವರಿದು ಮಾನ್ಯ ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿದ ನಂತರ ರಿಪೇರಿ ಕಾರ್ಯ ಮಾಡಿಸಿರುತ್ತೇನೆಂದು ಆರೋಪಿಸಿರುವುದು ಸತ್ಯಕ್ಕೆ ದೂರವಾದ ಸಂಗತಿಯಾಗಿದ್ದು, ನಾನು ದಿನಾಂಕ: 03-03-2014 ರಲ್ಲೇ ರಿಪೇರಿ ಮಾಡಿಸಿರುತ್ತೇನೆ.
>
> ಸದರಿ ಹ್ಯಾಂಡ್ ಪಂಪಿಗೆ ದಿನಾಂಕ: 27-06-2014 ರಲ್ಲಿ ಪೈಪ್‌ಗಳನ್ನು ಬಿಡಲಾಗಿದ್ದು ಇದು ಕೊಳವೆ ಬಾವಿಯಲ್ಲಿ ನೀರಿನ ಅಂಶ ಕಡಿಮೆಯಾದ ಕಾರಣವಾಗಿದ್ದು ಇದು ರಿಪೇರಿ ಕಾರ್ಯವಾಗಿರುವುದಿಲ್ಲವೆಂದು ತಿಳಿಸುತ್ತಾ, ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ ದಯಾಮಾಡಿ ನನ್ನ ಮೇಲೆ ವಿಧಿಸಿರುವ ದಂಡವನ್ನು ಕೈ ಬಿಟ್ಟು ನನ್ನನು ಆರೋಪ ಮುಕ್ತನನ್ನಾಗಿ ಪರಿಗಣಿಸಬೇಕೆಂದು ಮನವಿ ಮಾಡಿಕೊಂಡಿರುತ್ತಾರೆ".

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ಪ್ರಮುಖವಾಗಿ ವರದಿಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

> "Sri Purushotham, Panchayath Development Officer, Chikkanahalli Gram Panchayath, Bangalore South Taluk got the borewell repaired only after filing this complaint, though complainant submitted his application on 13.02.2014 in person and on 18.02.2014 by RPAD, DGO have refused to give the endorsement. DGO failed to get borewell repaired well within time.

DGO being a Government/public servant has failed to maintain absolute integrity besides devotion to duty and acted in a manner unbecoming of a Government Servant and thus committed misconduct as enumerated under Rule 3(1) of KCS (Conduct) Rules 1966", ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ, ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಕೆ.ಜಿ.ಪುರುಷೋತ್ತಮ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರಿಗೆ **"ಅವರ ಮುಂದಿನ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/10/ಗ್ರಾಪಂಕಾ/2018,**
**ಬೆಂಗಳೂರು, ದಿನಾಂಕ:22-05-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಕೆ.ಜಿ.ಪುರುಷೋತ್ತಮ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 1957ರ ನಿಯಮ 8(iii)ರನ್ವಯ **"ಅವರ ಮುಂದಿನ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

22/5

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
7. ಶ್ರೀ ಕೆ.ಜಿ.ಪುರುಷೋತ್ತಮ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕನಹಳ್ಳಿ ಗ್ರಾಮ ಪಂಚಾಯತಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ.